# ಕರ್ನಾಟಕ ವಿಧಾನ ಪರಿಷತ್ತು

| | | | |
|---|---|---|---|
| 1 | ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 872 |
| 2 | ಸದಸ್ಯರ ಹೆಸರು | : | ಶ್ರೀ ಛಲವಾದಿ ಟಿ.ನಾರಾಯಣಸ್ವಾಮಿ (ವಿಧಾನ ಸಭೆಯಿಂದ ಚುನಾಯಿತರಾದವರು) |
| 3 | ಉತ್ತರಿಸುವ ದಿನಾಂಕ | : | 22-02-2024 |
| 4 | ಉತ್ತರಿಸುವವರು | : | ಉಪ ಮುಖ್ಯಮಂತ್ರಿಗಳು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಬೆಂಗಳೂರು ನಗರದ ಕೆಂಗೇರಿ ಬಸ್ ಟರ್ಮಿನಲ್ ಮುಂದೆ ಇರುವ ಕೆಂಗೇರಿ ಕೆರೆಯ ವಿಸ್ತೀರ್ಣವೆಷ್ಟು; ಪ್ರಸ್ತುತ ಕೆರೆಯ ಸ್ಥಿತಿ-ಗತಿ ಏನು; ಕೆರೆಯ ಕಾಯಕಲ್ಪ ಆರಂಭಿಸಲಾಗಿದೆಯೇ; ಸದರಿ ಕೆರೆಯು ಉಪಯೋಗಕ್ಕೆ ಯೋಗ್ಯವಾಗಿದೆಯೇ; | ಬೃಹತ್ ಬೆಂಗಳೂರು ಮಹಾನಗರ ಪಾಲಿಕೆಯ ವಶದಲ್ಲಿರುವ ಕೆಂಗೇರಿ ಕೆರೆಯು ಕಂದಾಯ ಇಲಾಖೆಯ ದೃಢೀಕೃತ ದಾಖಲೆಯಲ್ಲಿರುವಂತೆ ಒಟ್ಟು ವಿಸ್ತೀರ್ಣ 30 ಎಕರೆ 01 ಗುಂಟೆಯಿದ್ದು ಈ ಕೆರೆಯನ್ನು ಸರ್ಕಾರದ ದಿನಾಂಕ: 11-12-2019ರ ಆದೇಶದಲ್ಲಿ ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರದಿಂದ ಪಾಲಿಕೆಗೆ ಹಸ್ತಾಂತರಿಸಿದ್ದು, ಕೆಂಗೇರಿ ಕೆರೆಯನ್ನು ರೂ.400.00 ಲಕ್ಷಗಳಲ್ಲಿ 15ನೇ ಹಣಕಾಸು ಯೋಜನೆಯಡಿಯಲ್ಲಿ ಕೆರೆಯ ಅಭಿವೃದ್ಧಿ ಕಾಮಗಾರಿಗಳನ್ನು ಕೈಗೊಂಡಿದ್ದು ಪ್ರಸ್ತುತ ಕಾಮಗಾರಿ ಪ್ರಗತಿಯಲ್ಲಿರುತ್ತದೆ. |
| ಆ) | ಸದರಿ ಕೆರೆಯ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಳ್ಳಲಾಗಿದೆಯೇ; ಕೆರೆಯ ಅಭಿವೃದ್ಧಿ ದೃಷ್ಟಿಯಿಂದ ಕಾಯಕಲ್ಪಕ್ಕಾಗಿ ಕೈಗೊಂಡ ಕಾಮಗಾರಿಗಳು ಯಾವುವು; ಇನ್ನೂ ಬಾಕಿ ಉಳಿದಿರುವ ಕಾಮಗಾರಿಗಳು ಯಾವುವು; ಎಷ್ಟು ಮೊತ್ತದ ಕಾಮಗಾರಿಗಳನ್ನು ಕೈಗೊಳ್ಳಲಾಗಿದೆ; ಸದರಿ ಕೆರೆಯನ್ನು ಅಭಿವೃದ್ಧಿಪಡಿಸಲು ಇಲ್ಲಿಯವರೆಗೆ ಎಷ್ಟು ಮೊತ್ತವನ್ನು ವೆಚ್ಚ ಮಾಡಲಾಗಿದೆ; ಸಂಪೂರ್ಣ ಮಾಹಿತಿ ನೀಡುವುದು; | ಸದರಿ ಕೆರೆಯ ಅಭಿವೃದ್ಧಿ ಕಾಮಗಾರಿಯನ್ನು ಕೈಗೊಂಡಿದ್ದು ಸದರಿ ಅಭಿವೃದ್ಧಿ ಕಾಮಗಾರಿಯಲ್ಲಿ ಕೆರೆಯಲ್ಲಿ, ಏರಿ ದುರಸ್ಥಿಗೊಳಿಸುವುದು, ಹೂಳೆತ್ತುವುದು ಕೊಳಚೆ ನೀರು ತಿರುವುಗಾಲುವೆ, ಒಳಹರಿವಿಗೆ ಸಿಲ್ಟ್ ಟ್ರಾಪ್ ಛೇಂಬರ್ ಮತ್ತು ಬಾಕ್ಸ್ ಕಲ್ವರ್ಟ್ ಕೆಲಸ ಪೂರ್ಣಗೊಂಡಿರುತ್ತದೆ. ಈಗಾಗಲೇ ಶೇಕಡಾ 70% ಕಾಮಗಾರಿಯ ಕೆಲಸ ಮುಗಿದಿದ್ದು ಉಳಿದ ಕೆಲಸಗಳಾದ ಹೊರಹರಿವಿಗೆ ಬಾಕ್ಸ್ ಕಲ್ವರ್ಟ್ ಕನ್‌ಸ್ಟ್ರಕ್ಷನ್, ಏರಿಗೆ ರಿವಿಟ್‌ಮೆಂಟ್ ಹಾಗೂ ಇತ್ಯಾದಿ ಕೆಲಸ ಪ್ರಗತಿಯಲ್ಲಿರುತ್ತದೆ. |
| ಇ) | ಈ ಕೆರೆಯ ಕ್ಷೇತ್ರ ವ್ಯಾಪ್ತಿಯು ಒತ್ತುವರಿಯಾಗಿದೆಯೇ; ಹಾಗಿದ್ದಲ್ಲಿ, ಒತ್ತುವರಿ ತೆರವುಗೊಳಿಸಲು ಹಾಗೂ ಒತ್ತುವರಿದಾರರ ವಿರುದ್ಧ ತೆಗೆದುಕೊಂಡ ಕ್ರಮಗಳೇನು; ಕೆರೆಗೆ ಕೊಳಚೆ ನೀರನ್ನು ಬಿಡಲಾಗುತ್ತಿದೆಯೇ; ಸಂಪೂರ್ಣ ಮಾಹಿತಿ ನೀಡುವುದು; | ಸರ್ಕಾರದ ಆದೇಶ ಸಂಖ್ಯೆ:ನಅಇ 250 ಎಂಎನ್‌ವೈ 2018 (ಭಾಗ-3), ದಿನಾಂಕ:28-08-2023 ರನ್ವಯ ಕ್ರಮ ಜರುಗಿಸಲಾಗುತ್ತಿದೆ. |

. . . 2 .

| | | |
|---|---|---|
| ಈ) | ಅಭಿವೃದ್ಧಿ ಕಾಮಗಾರಿಗಳು ನಿಧಾನಗತಿಯಲ್ಲಿ ಸಾಗಿದ್ದು, ಕೆರೆಯ ಅಭಿವೃದ್ಧಿಗೆ ಹಿನ್ನಡೆಯಾಗುತ್ತಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಮತ್ತು ಕಾಮಗಾರಿಗಳನ್ನು ಕೈಗೊಳ್ಳುವ ಸಲುವಾಗಿ ಕೆರೆಯ ನೀರನ್ನು ಹೊರಹಾಕಿರುವುದರಿಂದ ಕೆರೆಯಲ್ಲಿ ನೀರು ಸಂಗ್ರಹ ಇಲ್ಲದೇ ಸುತ್ತಮುತ್ತಲಿನ ಪ್ರದೇಶಗಳಲ್ಲಿ ಅಂತರ್ಜಲ ಮಟ್ಟ ಗಣನೀಯ ಪ್ರಮಾಣದಲ್ಲಿ ಕುಸಿತ ಕಂಡಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ? | ಕೆಂಗೇರಿ ಕೆರೆಯಲ್ಲಿ ಬೆಂಗಳೂರು ನೀರು ಸರಬರಾಜು ಮತ್ತು ಒಳಚರಂಡಿ ಇಲಾಖೆ ರವರು ಕಾಮಗಾರಿ ಕೈಗೊಂಡಿದ್ದರಿಂದ ಕೆರೆಯ ಕಾಮಗಾರಿಯನ್ನು ಪೂರ್ಣಗೊಳಿಸುವಲ್ಲಿ ಹಿನ್ನಡೆಯಾಗಿರುತ್ತದೆ. ಈಗ ಸದರಿ ಕಾಮಗಾರಿಯನ್ನು ಚುರುಕುಗೊಳಿಸಲಾಗಿದೆ. 2023 ರಲ್ಲಿ ಸದರಿ ಪ್ರದೇಶದಲ್ಲಿ ಮಳೆ ಕಡಿಮೆಯಾಗಿರುವುದರಿಂದ ಹೆಚ್ಚಿನ ಪ್ರಮಾಣದಲ್ಲಿ ಕೆರೆಗೆ ನೀರು ಬಂದಿರುವುದಿಲ್ಲ. |

**ನಅಇ 84 ಎಂಎಸ್‌ವೈ 2024**

**(ಡಿ.ಕೆ. ಶಿವಕುಮಾರ್)**
ಉಪ ಮುಖ್ಯಮಂತ್ರಿ